# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 492 |
| ಸದಸ್ಯರ ಹೆಸರು | : | ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 19.07.2024 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಮೂಲಭೂತ ಸೌಲಭ್ಯಗಳಾದ ಗಾಳಿ ಬೆಳಕಿಲ್ಲದೆ, ವಿದ್ಯುತ್ ಸೌಕರ್ಯ ಕುಡಿಯುವ ನೀರು ಶೌಚಾಲಯಗಳಿಲ್ಲದೆ ಚಿಕ್ಕ ಚಿಕ್ಕ ಖಾಸಗಿ ಕೊಠಡಿಗಳಲ್ಲಿ ಹಾಗೂ ತಗಡಿ/ಶೀಟಿನ ಕೇಂದ್ರಗಳಲ್ಲಿ ನಡೆಸಲಾಗುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ 47236 ಸ್ವಂತ ಕಟ್ಟಡಗಳು, 12653 ಬಾಡಿಗೆ ಕಟ್ಟಡಗಳು ಮತ್ತು 10030 ಇತರೆ ಮತ್ತು ಇತರೆ ಸರ್ಕಾರಿ ಕಟ್ಟಡಗಳಲ್ಲಿ ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಗಾಳಿ, ಬೆಳಕು, ನೀರು, ಇತ್ಯಾದಿ ಲಭ್ಯವಿರುವ ಕಟ್ಟಡಗಳಲ್ಲಿ ಅಂಗನವಾಡಿ ಕೇಂದ್ರಗಳನ್ನು ನಡೆಸಲು ಕ್ರಮವಹಿಸಿದೆ. ನಿರ್ದಿಷ್ಟ ಪ್ರಕರಣಗಳಲ್ಲಿ ಸೂಕ್ತ ಮೂಲಭೂತ ಸೌಕರ್ಯ ಇಲ್ಲದಿದ್ದಲ್ಲಿ ಅವುಗಳನ್ನು ಸೂಕ್ತ ಕಟ್ಟಡಕ್ಕೆ ಸ್ಥಳಾಂತರಿಸಲು ಸೂಚನೆ ನೀಡಲಾಗಿದೆ. |
| ಆ. | ಸರ್ಕಾರವು ಕೂಡಲೇ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕೈಗೊಳ್ಳುವ ಕ್ರಮವೇನು; | ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ವಾರ್ಷಿಕವಾಗಿ ಅನುದಾನ ಮತ್ತು ನಿವೇಶನ ಲಭ್ಯತೆಗನುಗುಣವಾಗಿ ಹಂತ-ಹಂತವಾಗಿ ಕ್ರಮ ವಹಿಸಲಾಗುತ್ತಿದೆ.<br>2023-24: 585<br>2024-25: 692+4176 |
| ಇ. | ಸ್ವಂತ ಕಟ್ಟಡವನ್ನು ನಿರ್ಮಿಸುವವರೆಗೆ ಎಲ್ಲಾ ಅಂಗನವಾಡಿ ಕೇಂದ್ರಗಳು ಮೂಲಭೂತ ಸೌಲಭ್ಯಗಳಿಂದ ವಂಚಿತವಾಗದಂತೆ ನೋಡಿಕೊಳ್ಳಲು ಸರ್ಕಾರ ಕೈಗೊಳ್ಳಲು ಕ್ರಮವೇನು? | ಸ್ವಂತ ಕಟ್ಟಡವನ್ನು ನಿರ್ಮಿಸುವವರೆಗೆ ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನೊಳಗೊಂಡ ಬಾಡಿಗೆ ಕಟ್ಟಡಗಳನ್ನು ಪಡೆಯಲು ಮೆಟ್ರೋಪಾಲಿಟನ್ ವ್ಯಾಪ್ತಿಯಲ್ಲಿನ ಬಾಡಿಗೆ ಮಾಹೆಯಾನ ರೂ.8000/-, ಪುರಸಭೆ/ನಗರಸಭೆ ವ್ಯಾಪ್ತಿಯಲ್ಲಿ ರೂ.6000/- ಮತ್ತು ಗ್ರಾಮೀಣ/ಬುಡಕಟ್ಟು ಪ್ರದೇಶ ವ್ಯಾಪ್ತಿಯಲ್ಲಿ ರೂ.2000/-ಗಳನ್ನು ನಿಗಧಿಪಡಿಸಲಾಗಿದೆ. ಹಾಗೂ ಎಲ್ಲಾ ಮೂಲಭೂತ ಸೌಲಭ್ಯಗಳನ್ನೊಳಗೊಂಡ ಇತರೆ ಸರ್ಕಾರಿ ಕಟ್ಟಡಗಳನ್ನು ಒದಗಿಸಲು ಸೂಕ್ತ ಕ್ರಮ ವಹಿಸಲಾಗಿದೆ. |

**ಸಂಖ್ಯೆ: ಮಮಇ 135 ಐಸಿಡಿ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.